ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/07/ಎಲ್ಆರ್‌ಡಿಸಿ/2017-18 | 3379

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 03-10-2017

## -:ಸುತ್ತೋಲೆ:-

**ವಿಷಯ:-** 2017-18 ನೇ ಸಾಲಿನ ರಾಜ್ಯ ಮಟ್ಟದ "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ಆಯೋಜಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರದ ಸಂಖ್ಯೆ: ಇಡಿ/096/ಟಿಪಿಇ/2016, ದಿ:08-12-2016.

****

ವಿಧ್ಯಾರ್ಥಿಗಳಲ್ಲಿ ಅಡಗಿರುವ ಕ್ರಿಯಾತ್ಮಕ ಪ್ರತಿಭೆಯನ್ನು ಹೊರತರುವ ಉದ್ದೇಶದಿಂದ ಪ್ರತಿ ವರ್ಷವೂ ರಾಜ್ಯ ಮಟ್ಟದ **"ನೀವೇ ಮಾಡಿ ನೋಡಿ"** ತಾಂತ್ರಿಕ ವಸ್ತು ಪ್ರದರ್ಶನವನ್ನು ರಾಜ್ಯದ ಸರ್ಕಾರಿ/ ಅನುದಾನಿತ/ಖಾಸಗಿ ಇಂಜಿನೀಯರಿಂಗ್ ಕಾಲೇಜುಗಳಲ್ಲಿ / ಪಾಲಿಟೆಕ್ನಿಕ್‌ಗಳಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದ್ದು, ಕಳೆದ ವರ್ಷ ಅಂದರೆ 2016-17ನೇ ಸಾಲಿನ ರಾಜ್ಯ ಮಟ್ಟದ "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ಬಾಗಲಕೋಟೆಯ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ, ಯಶಸ್ವಿಯಾಗಿ ಆಯೋಜಿಸಲಾಯಿತು.

ಪ್ರತಿ ವರ್ಷದಂತೆ ಈ ವರ್ಷವೂ 2017-18 ನೇ ಸಾಲಿನ ರಾಜ್ಯ ಮಟ್ಟದ **"ನೀವೇ ಮಾಡಿ ನೋಡಿ"** ತಾಂತ್ರಿಕ ವಸ್ತು ಪ್ರದರ್ಶನವನ್ನು 2018 ರ ಪೆಬ್ರವರಿ ನಾಲ್ಕನೆ ಅಥವಾ ಮಾರ್ಚ ತಿಂಗಳ ಮೋದಲನೆ ವಾರದಲ್ಲಿ ಚಿಕ್ಕಬಳ್ಳಾಪುರದ ಬಿ.ಜಿ.ಎಸ್ ಪಾಲಿಟೆಕ್ನಿಕ್‌ನಲ್ಲಿ ಆಯೋಜಿಸಲಾಗುವುದು. ಸದರಿ ತಾಂತ್ರಿಕ ವಸ್ತು ಪ್ರದರ್ಶನವನ್ನು ಆಯೋಜಿಸುವ ನಿಖರವಾದ ದಿನಾಂಕವನ್ನು ನಂತರ ತಿಳಿಸಲಾಗುವುದು, ತಾಂತ್ರಿಕ ವಸ್ತು ಪ್ರದರ್ಶನವದಲ್ಲಿ ಭಾಗವಹಿಸುವ ವಿಧ್ಯಾರ್ಥಿಗಳು ಪೂರ್ವ ಸಿದ್ದತೆಗಳನ್ನು ಮಾಡಿಕೋಳ್ಳವ ಸಂಬಂಧ ಈ ಮಾಹಿತಿಯನ್ನು ಎಲ್ಲಾ ವಿಧ್ಯಾರ್ಥಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು (ಸಿಡಿಸಿ)
3/10/17

ಇವರಿಗೆ:

1. ಪ್ರಾಂಶುಪಾಲರು ಬಿ.ಜಿ.ಎಸ್ ಪಾಲಿಟೆಕ್ನಿಕ್, ಚಿಕ್ಕಬಳ್ಳಾಪುರ ಇವರ ಮಾಹಿತಿಗಾಗಿ ಮತ್ತು ಕಾರ್ಯಕ್ರಮವನ್ನು ಆಯೋಜಿಸುವ ಸಂಬಂಧ ಎಲ್ಲಾ ಪೂರ್ವ ಸಿದ್ದತೆಗಳನ್ನು ಮಾಡಿಕೋಳ್ಳವುದು.
2. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಮತ್ತು ಇಂಜಿನೀಯರಿಂಗ್ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಇ-ಗೌರ್ವನೆನ್ಸ್ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.
4. ಜಂಟಿ ನಿರ್ದೇಶಕರು(ಯೋಜನೆ) ಇವರ ಮಾಹಿತಿಗಾಗಿ. ಮತ್ತು ಉಲ್ಲೇಖದಲ್ಲಿನ ಸರ್ಕಾರದ ಪತ್ರದನ್ವಯ ಹತ್ತು (10.00 Ten lakhs only) ಲಕ್ಷ ರೂಪಾಯಿಗಳ ಅನುದಾನವನ್ನು ಕಾಯ್ದಿರಿಸಲು ಕೋರಿದೆ.